ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

ಉಪತಹಶೀಲ್ದಾರವರ ನ್ಯಾಯಾಲಯ ನಾಡಕಛೇರಿ ಕೊಟ್ಟೂರು

ಸಂ/ಕಂ/ಹ.ಬ./ನಾಕಕೊ/43/2016-17. ದಿನಾಂಕ:03-10-2016.

| ವಾದಿಗಳು | ಪ್ರತಿವಾದಿಗಳು |
|---|---|
| 1)ಎ.ಮರುಳಸಿದ್ದಪ್ಪ ತಂದೆ ಲೇಟ್ ಎ.ಸಿದ್ಲಿಂಗಪ್ಪ<br>2)ಎ.ಬಸವರಾಜ ತಂದೆ ಲೇಟ್ ಎ.ಸಿದ್ಲಿಂಗಪ್ಪ<br>3)ಎ.ಮಲ್ಲಿಕಾರ್ಜುನ ತಂದೆ ಲೇಟ್ ಎ.ಸಿದ್ಲಿಂಗಪ್ಪ<br>4)ಎ.ಯೋಗೇಶ ತಂದೆ ಲೇಟ್ ಎ.ಸಿದ್ಲಿಂಗಪ್ಪ<br>ಉಜ್ಜನಿ ಗ್ರಾಮ<br>ಕೂಡ್ಲಿಗಿ ತಾಲೂಕು | ಅಳುವುರು ಸಿದ್ದಪ್ಪ ತಂದೆ ಲೇಟ್ ಸಿದ್ಲಿಂಗಪ್ಪ<br>ಉಜ್ಜನಿ ಗ್ರಾಮ<br>ಕೂಡ್ಲಿಗಿ ತಾಲೂಕು |
| ಕೂಡ್ಲಿಗಿ ತಾಲೂಕು ಉಜ್ಜನಿ ಗ್ರಾಮದ ಸನಂ 250ಡಿ. ವಿಸ್ತೀರ್ಣ 3-18. ಎಕ್ರೆ ಜಮೀನನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಉಜ್ಜನಿ ಗ್ರಾಮದ ಸನಂ 250ಡಿ. ವಿಸ್ತೀರ್ಣ 3-18. ಎಕ್ರೆ ಜಮೀನನ್ನು ಸದರಿ ಗ್ರಾಮದ ಎ.ಮರುಳಸಿದ್ದಪ್ಪ ತಂದೆ ಲೇಟ್ ಎ.ಸಿದ್ಲಿಂಗಪ್ಪ ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಉಜ್ಜನಿ ಇವರು ನಮೂನೆ-21 ನೋಟಿಸನ್ನು ದಿನಾಂಕ 05-12-2012 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಪಟ್ಟದಾರನ ಇನ್ನಿತರೇ ನಮೂನೆ-21 ಕ್ಕೆ ಸಹಿ ಮಾಡಿಲ್ಲದ ಕಾರಣ ಈ ಪ್ರಕರಣದ ಎಂ.ಆರ್.ನಂಬರ್: 43/2012-13. ದಿನಾಂಕ 16-01-2013. ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 26-07-2016 ರಿಂದ 03-10-2016 ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಮತ್ತು ತಕರಾರುದಾರರು ಗೈರುಹಾಜರಾಗಿರುತ್ತಾರೆ. ಅರ್ಜಿದಾರರು ಉಜ್ಜನಿ ಗ್ರಾಮದ ಸನಂ 250ಡಿ. ವಿಸ್ತೀರ್ಣ 3-18. ಎಕ್ರೆ ಜಮೀನು ಸಿದ್ಲಿಂಗಪ್ಪ ತಂದೆ ಆಳುವುರು ಸಿದ್ಲಿಂಗಪ್ಪ ಇವರ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇದ್ದು ಇವರು ನಿಧನ ಹೊಂದಿರುವ ಕಾರಣ ಪೋತಿವಾರಸು ಹಕ್ಕಿನ ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಮಾತ್ರ ಸಲ್ಲಿಸಿದ್ದು ವಿಚಾರಣೆಗೆ ಗೈರು ಹಾಜರಾಗಿರುತ್ತಾರೆ.

ತದಾನಂತರ ಅರ್ಜಿದಾರರು ಸದರಿ ವಿವಾದಿತ ಜಮೀನು ನಮ್ಮ ತಂದೆಯವರ ಹೆಸರಿನಲ್ಲಿದ್ದು ನಮ್ಮ ತಂದೆಯವರ ಅಣ್ಣನಾದ ಅಳುವುರು ಸಿದ್ದಪ್ಪ ತಂದೆ ಲೇಟ್ ಸಿದ್ಲಿಂಗಪ್ಪ ಇವರು ತಕರಾರು ಅರ್ಜಿ ಸಲ್ಲಿಸಿರುವುದರಿಂದ ನಾವುಗಳು ಮಾತು ಕತೆಯ ಮೂಲಕ ಮೇಲೆ ಕಾಣಿಸಿದ ವಿಷಯವನ್ನು ಬಗೆಹರಿಸಿ ಕೊಂಡಿರುತ್ತೇವೆ. ಕಾರಣ ಸದರಿ ಜಮೀನಿನ ಪಹಣಿಯನ್ನು ಯಥಾಸ್ಥಿತಿಯಂತೆ ಮುಂದುವರೆಸಲು ಕೋರಿ ದಿನಾಂಕ 26-07-2016 ರಂದು ಅರ್ಜಿ ಸಲ್ಲಿಸಿರುತ್ತಾರೆ.

ಪು.ತಿ.ನೋ-2.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರು ವಿಚಾರಣೆಗೆ ಗೈರು ಹಾಜರಾಗಿರುವ ಕಾರಣ ಹಾಗೂ ಸದರಿ ಜಮೀನಿನ ಪಹಣಿಯನ್ನು ಯಥಾಸ್ಥಿತಿಯಂತೆ ಮುಂದುವರೆಸಲು ಕೋರಿ ಅರ್ಜಿ ಸಲ್ಲಿಸಿರುವ ಕಾರಣ ಹಾಗೂ ಅರ್ಜಿದಾರರು ಈ ಪ್ರಕರಣದಲ್ಲಿ ಆಸಕ್ತಿ ಇಲ್ಲವೆಂದು ಬಾವಿಸಿ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

**-:ಆದೇಶ:-**

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಉಜ್ಜನಿ ಗ್ರಾಮದ ಸನಂ 250ಡಿ. ವಿಸ್ತೀರ್ಣ 3-18. ಎಕ್ರೆ ಜಮೀನಿನ ಅರ್ಜಿದಾರರು ವಿಚಾರಣೆಗೆ ಗೈರು ಹಾಜರಾಗಿರುವ ಕಾರಣ ಅವರು ಈ ಬಗ್ಗೆ ಆಸಕ್ತಿ ಇಲ್ಲವೆಂದು ಬಾವಿಸಿ ಪಹಣಿಯನ್ನು ಯಥಾಸ್ಥಿತಿಯಂತೆ ಮುಂದುವರೆಸಲು ಆದೇಶಿಸಿ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 03-10-2016. ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಛೇರಿ
ಕೊಟ್ಟೂರು

ಇದರ ಪ್ರತಿಯನ್ನು:

1) ಅರ್ಜಿದಾರರಾದ ಎ.ಮರುಳಸಿದ್ದಪ್ಪ ತಂದೆ ಲೇಟ್ ಎ.ಸಿದ್ಲಿಂಗಪ್ಪ ಹಾಗೂ ಇತರರು ಉಜ್ಜನಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ತಕರಾರುದಾರರಾದ ಅಳುವುರು ಸಿದ್ದಪ್ಪ ತಂದೆ ಲೇಟ್ ಸಿದ್ಲಿಂಗಪ್ಪ ಉಜ್ಜನಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.